ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

3

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE 24/10/20

'ಈ ವಿಷಯದಲ್ಲಿ ಚುನಾವಣೆ ಆಯೋಗ ಸ್ವತಂತ್ರ'

# ಗ್ರಾ.ಪಂ ಚುನಾವಣೆಗೆ ಕ್ರಮ ಕೈಗೊಳ್ಳಿ: ಹೈಕೋರ್ಟ್

ಪ್ರಜಾವಾಣಿ ವಾರ್ತೆ 24-10-20



ಬೆಂಗಳೂರು: ರಾಜ್ಯದ 5,800 ಗ್ರಾಮ ಪಂಚಾಯಿತಿಗಳಿಗೆ ಚುನಾವಣೆ ನಡೆಸುವ ಸಂಬಂಧ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ರಾಜ್ಯ ಚುನಾವಣಾ ಆಯೋಗಕ್ಕೆ ಹೈಕೋರ್ಟ್ ನಿರ್ದೇಶನ ನೀಡಿದೆ.

ಕೆ.ಸಿ. ಕೊಂಡಯ್ಯ ಮತ್ತು ಇತರರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕಾ ನೇತೃತ್ವದ ವಿಭಾಗೀಯ ಪೀಠ, 'ಚುನಾವಣೆ ವಿಷಯದಲ್ಲಿ ನಿರ್ಧಾರ ಕೈಗೊಳ್ಳುವ ಸ್ವಾತಂತ್ರ್ಯ ಆಯೋಗಕ್ಕೆ ಇದೆ' ಎಂದು ಹೇಳಿತು.

'ಸರ್ಕಾರದೊಂದಿಗೆ ಜೂನ್‌ನಲ್ಲಿ ಸಮಾಲೋಚನೆ ನಡೆಸಲಾಯಿತು. ಮತ್ತೆ ಸಮಾಲೋಚನೆ ನಡೆಸಿ ಆಯೋಗದ ಸ್ವಾತಂತ್ರ್ಯ ಉಲ್ಲಂಘಿಸಲು ಆಗುವುದಿಲ್ಲ' ಎಂದು ಆಯೋಗದ ಪರ ವಕೀಲ ಕೆ.ಎನ್. ಫಣೀಂದ್ರ ತಿಳಿಸಿದರು.

'ಚುನಾವಣೆ ಮುಂದೂಡುವ ವಿಷಯದಲ್ಲಿ ಯಾವುದೇ ರಾಜಕೀಯ ಉದ್ದೇಶ ಇಲ್ಲ. ಕೋವಿಡ್ ಕಾರಣದಿಂದ ನಾಗರಿಕರ ಆರೋಗ್ಯದ ಬಗ್ಗೆಯಷ್ಟೇ ಸರ್ಕಾರ ಯೋಚಿಸುತ್ತಿದೆ' ಎಂದು ಅಡ್ವೊಕೇಟ್ ಜನರಲ್ ಹೇಳಿದರು.

'ಮಾಲ್‌ಗಳು, ಧಾರ್ಮಿಕ ಕೇಂದ್ರಗಳು, ಚಲನಚಿತ್ರ ಮಂದಿರಗಳನ್ನು ಸರ್ಕಾರ ತೆರೆದಿದೆ. ಆದರೆ, ಗ್ರಾಮ ಪಂಚಾಯಿತಿ ಚುನಾವಣೆ ನಡೆಸುವ ವಿಷಯದಲ್ಲಷ್ಟೇ ಕಾರಣ ಹೇಳುತ್ತಿದೆ. ಸಂವಿಧಾನ ನೀಡಿರುವ ಅಧಿಕಾರದ ಪ್ರಕಾರ ಚುನಾವಣಾ ಆಯೋಗ ರಾಜ್ಯಪಾಲರಿಗೆ ಮಾಹಿತಿ ಸಲ್ಲಿಸಬೇಕೆ ವಿನಃ ಸರ್ಕಾರಕ್ಕೆ ಅಲ್ಲ' ಎಂದು ಅರ್ಜಿದಾರರೊಬ್ಬರ ಪರ ವಕೀಲ ರವಿವರ್ಮ ಕುಮಾರ್ ತಿಳಿಸಿದರು.

'ಅವಧಿ ಮುಗಿದಿರುವ ಗ್ರಾಮ ಪಂಚಾಯಿತಿಗಳಿಗೆ ನೇಮಕ ಆಗಿರುವ ಆಡಳಿತಾಧಿಕಾರಿಗಳ ಅವಧಿ ಡಿಸೆಂಬರ್‌ನಲ್ಲಿ ಮುಕ್ತಾಯವಾಗಲಿದೆ, ಅದನ್ನು ವಿಸ್ತರಿಸಲು ಆಗುವುದಿಲ್ಲ' ಎಂದೂ ಹೇಳಿದರು.

# ಆನ್‌ಲೈನ್‌ನಲ್ಲೇ ಎನ್‌ಒಸಿ ಲಭ್ಯ

ಬೆಂಗಳೂರು: ವಾಣಿಜ್ಯ ಮಳಿಗೆ ಹಾಗೂ ಬಹುಮಹಡಿ ಕಟ್ಟಡಗಳ ನಿರ್ಮಾಣಕ್ಕಾಗಿ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯಿಂದ ನೀಡುವ ನಿರಾಕ್ಷೇಪಣಾ ಪತ್ರ (ಎನ್‌ಒಸಿ) ಹಾಗೂ ಕಾಮಗಾರಿ ಪೂರ್ಣಗೊಂಡ ಪ್ರಮಾಣ ಪತ್ರ (ಸಿ.ಸಿ) ಇನ್ನು ಮುಂದೆ ಆನ್‌ಲೈನ್‌ನಲ್ಲೇ ಸಿಗಲಿದೆ. ಈ ಬಗ್ಗೆ ಸರ್ಕಾರ ಆದೇಶ ಹೊರಡಿಸಿದೆ.

'ಎನ್‌ಒಸಿ ಮತ್ತು ಸಿ.ಸಿ ನೀಡಲು ಭೌತಿಕವಾಗಿ ಅರ್ಜಿ ಸಲ್ಲಿಸುವ ಪ್ರಕ್ರಿಯೆಗಳನ್ನು ಕೈಬಿಡಲಾಗಿದೆ. ಸಾರ್ವಜನಿಕರು ಆನ್‌ಲೈನ್ ಮೂಲಕವೇ ಈ ಸೇವೆ ಪಡೆಯಬಹುದು. ಈ ಬಗ್ಗೆ ವಿಸ್ತೃತ ಪ್ರಕಟಣೆಯೊಂದನ್ನು ಸದ್ಯದಲ್ಲೇ ಬಿಡುಗಡೆ ಮಾಡಲಾಗುವುದು' ಎಂದು ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

'ಸೇವಾ ಸಿಂಧು' ಜಾಲತಾಣದಲ್ಲಿ ಅರ್ಜಿ ಸಲ್ಲಿಸಬೇಕು. ಕಟ್ಟಡದ ವಿವರ, ನೀಲನಕ್ಷೆ, ಕಟ್ಟಡ ನಿರ್ಮಾಣದ ಉದ್ದೇಶ ಸೇರಿ ಎಲ್ಲ ಮಾಹಿತಿ ನೀಡಬೇಕು. ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಕ್ರಮ ಕೈಗೊಳ್ಳಲಿದ್ದಾರೆ' ಎಂದೂ ಹೇಳಿದ್ದಾರೆ.